# ಕರ್ನಾಟಕ ಸರ್ಕಾರ

## ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

ಆಯುಕ್ತರ ಕಛೇರಿ, ನಂ.16-ಡಿ, 3ನೇ ಮಹಡಿ, ಡಿ. ದೇವರಾಜ ಅರಸು ಭವನ,

ಮಿಲ್ಲರ್ಸ್ ಕೆರೆ ಅಂಗಳ, ವಸಂತನಗರ, ಬೆಂಗಳೂರು-52.

## ಡಿ.ದೇವರಾಜ ಅರಸು ಪ್ರತಿಭಾ ಪುರಸ್ಕಾರ

## ವಿದ್ಯಾರ್ಥಿಗಳಿಗೆ ಸೂಚನೆಗಳು (Instructions to the Students)

(ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಅಲ್ಪಸಂಖ್ಯಾತ ವಿದ್ಯಾರ್ಥಿಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಈ ಸೌಲಭ್ಯವನ್ನು ಪಡೆಯಲು ಅವಕಾಶವಿರುವುದಿಲ್ಲ)

ಸಂಖ್ಯೆBCWD-16016/1/2018-BCWD_TRAINING-BCWD (51546), ದಿನಾಂಕ: 24.07.2018. 30

1. 2017-18 ಸಾಲಿನಲ್ಲಿ ಎಸ್.ಎಸ್.ಎಲ್.ಸಿ/ ದ್ವಿತೀಯ ಪಿ.ಯು.ಸಿ. ಯಲ್ಲಿ ವ್ಯಾಸಂಗ ಮಾಡಿ ಮಾರ್ಚ್/ಏಪ್ರಿಲ್ 2018 ರಲ್ಲಿ ನಡೆದ ವಾರ್ಷಿಕ ಪರೀಕ್ಷೆಯಲ್ಲಿ ಶೇ.90 ಮತ್ತು ಅದಕ್ಕಿಂತ ಹೆಚ್ಚಿನ ಅಂಕಗಳನ್ನು ಗಳಿಸಿರಬೇಕು.
2. ವಿದ್ಯಾರ್ಥಿಗೆ ನಿಗದಿಪಡಿಸಿರುವ ಅರ್ಹತೆಗಳು:
   - ಭಾರತದ ಪ್ರಜೆಯಾಗಿದ್ದು, ಕರ್ನಾಟಕದ ಖಾಯಂ ನಿವಾಸಿಯಾಗಿದ್ದು, ಅರ್ಜಿ ಸಲ್ಲಿಸುವ ದಿನಾಂಕಕ್ಕೆ ಕನಿಷ್ಠ 7 ವರ್ಷ ಕರ್ನಾಟಕದಲ್ಲಿ ವ್ಯಾಸಂಗ ಮಾಡಿರತಕ್ಕದ್ದು.
   - ಕರ್ನಾಟಕ ಸರ್ಕಾರ ಅಧಿಸೂಚಿಸಿರುವ ಹಿಂದುಳಿದ ವರ್ಗಗಳ ಪಟ್ಟಿಗೆ ಸೇರಿರಬೇಕು.
   - ಸರ್ಕಾರಿ/ಮಾನ್ಯತೆ ಪಡೆದ ಅನುದಾನಿತ/ಅನುದಾನ ರಹಿತ ಶಾಲೆ/ಕಾಲೇಜುಗಳಲ್ಲಿ (ಎಸ್.ಎಸ್.ಎಲ್.ಸಿ/ದ್ವಿತೀಯ ಪಿ.ಯು.ಸಿ) ವ್ಯಾಸಂಗ ಮಾಡಿರಬೇಕು.
   - ಸಮಾನ ಕೋರ್ಸ್‌ಗಳಿಗೆ ಸಂಬಂಧಿಸಿದಂತೆ ಒಬ್ಬ ವಿದ್ಯಾರ್ಥಿಗೆ ಒಂದು ಬಾರಿ ಮಾತ್ರ ಈ ಸೌಲಭ್ಯವನ್ನು ನೀಡಲಾಗುವುದು.
   - ವಿದ್ಯಾರ್ಥಿಯೂ ಸೇರಿದಂತೆ ಕುಟುಂಬದ ಒಟ್ಟು ವಾರ್ಷಿಕ ಆದಾಯಮಿತಿ: (ತಹಶೀಲ್ದಾರ್ ರವರಿಂದ ಪಡೆದ ಜಾತಿ ಮತ್ತು ಆದಾಯ ಪ್ರಮಾಣ ಪತ್ರವು ಕಡ್ಡಾಯವಾಗಿ ವಿದ್ಯಾರ್ಥಿ/ಫಲಾನುಭವಿಯ ಹೆಸರಿನಲ್ಲಿಯೇ ಇರಬೇಕು)

     ಅ) ಪ್ರವರ್ಗ-1 - ರೂ.2.50 ಲಕ್ಷ.

     ಆ) ಪ್ರವರ್ಗ-2(ಎ), 3(ಎ) ಮತ್ತು 3(ಬಿ) - ರೂ.1.00 ಲಕ್ಷ.
3. ಪ್ರತಿಭಾ ಪುರಸ್ಕಾರದ ಮೊತ್ತ -

| ಕ್ರ. ಸಂ. | ತರಗತಿ | ಪ್ರತಿಭಾ ಪುರಸ್ಕಾರ ನೀಡುವ ಗರಿಷ್ಠ ವಿದ್ಯಾರ್ಥಿಗಳ ಸಂಖ್ಯೆ | ಪ್ರತಿಭಾ ಪುರಸ್ಕಾರದ ಮೊತ್ತ (ರೂ.ಗಳಲ್ಲಿ) |
|---|---|---|---|
| 1 | ಎಸ್.ಎಸ್.ಎಲ್.ಸಿ. | 1000 | 10,000/- |
| 2 | ದ್ವಿತೀಯ ಪಿ.ಯು.ಸಿ. | 500 | 15,000/- |

4. ಎಸ್.ಎಸ್.ಎಲ್.ಸಿ. ಮತ್ತು ದ್ವಿತೀಯ ಪಿ.ಯು.ಸಿ.ಯ ವಿದ್ಯಾರ್ಥಿಗಳಿಗೆ ನಿಗದಿಪಡಿಸಿರುವ ಮೀಸಲಾತಿಯ ವಿವರ.

| ಕ್ರ.ಸಂ | ಪ್ರವರ್ಗ | ಶೇಕಡವಾರು |
|---|---|---|
| 1 | 1 | 24% |
| 2 | 2ಎ | 46% |
| 3 | 3ಎ | 14% |
| 4 | 3ಬಿ | 16 |
| | ಒಟ್ಟು | 100% |

5. ಮಹಿಳಾ ವಿದ್ಯಾರ್ಥಿಗಳಿಗೆ ಶೇ.33 ಹಾಗೂ ವಿಕಲಚೇತನ ವಿದ್ಯಾರ್ಥಿಗಳಿಗೆ ಶೇ.3 ರ ಮೀಸಲಾತಿಯನ್ವಯ ಡಿ. ದೇವರಾಜ ಅರಸು ಪ್ರತಿಭಾ ಪುರಸ್ಕಾರವನ್ನು ನೀಡಲಾಗುವುದು.
6. ಎಸ್.ಎಸ್.ಎಲ್.ಸಿ. ವಿದ್ಯಾರ್ಥಿಗಳಿಗೆ ಡಿ. ದೇವರಾಜ ಅರಸು ಪ್ರತಿಭಾ ಪುರಸ್ಕಾರವನ್ನು ನೀಡುವ ಆದ್ಯತೆಯ ವಿವರ.

| ಕ್ರ. ಸಂ. | ವಿವರ | ನಿಗದಿಪಡಿಸಿದ ಅನುದಾನ | ಷರಾ |
|---|---|---|---|
| 1 | • ಸರ್ಕಾರಿ ಶಾಲೆ<br>• ಅನುದಾನಿತ/ಅನುದಾನ ರಹಿತ ಕನ್ನಡ ಮಾಧ್ಯಮ ಶಾಲೆಗಳಲ್ಲಿ ಅಧ್ಯಯನ ಮಾಡಿರುವ ವಿದ್ಯಾರ್ಥಿಗಳು | • ಶೇ.50 | ಕ್ರಮ ಸಂಖ್ಯೆ 1 ರಲ್ಲಿ ಅರ್ಹ ವಿದ್ಯಾರ್ಥಿಗಳು ಲಭ್ಯವಾಗದೇ ಇದ್ದಲ್ಲಿ ಕ್ರಮ ಸಂಖ್ಯೆ 2 ರ ವಿದ್ಯಾರ್ಥಿಗಳಿಗೆ ಅನುದಾನವನ್ನು ಮರು ಹಂಚಿಕೆ ಮಾಡಲಾಗುವುದು. |
| 2 | • ಬಾಕಿ ಉಳಿದ ವಿದ್ಯಾರ್ಥಿಗಳಿಗೆ, ಪ್ರವರ್ಗವಾರು/ ಮೀಸಲಾತಿ/ಮೆರಿಟ್ ಆಧಾರದ ಮೇಲೆ ಪ್ರತಿಭಾ ಪುರಸ್ಕಾರ ನೀಡಲಾಗುವುದು. | • ಶೇ.50 | |

7. ಅರ್ಜಿ ಸಲ್ಲಿಕೆ ಹಾಗೂ ಮಂಜೂರಾತಿ ವಿಧಾನ -

ಅ) ಈ ಯೋಜನೆಯಡಿ ಸೌಲಭ್ಯವನ್ನು ಪಡೆಯಲು ಅರ್ಹ ವಿದ್ಯಾರ್ಥಿಗಳು ಆನ್-ಲೈನ್ ಮೂಲಕ ಸೂಕ್ತ ದಾಖಲೆಗಳೊಂದಿಗೆ ಅರ್ಜಿಯನ್ನು ಸಲ್ಲಿಸುವುದು. ಆನ್-ಲೈನ್ ಅರ್ಜಿಯನ್ನು ಹೊರತು ಪಡಿಸಿ ಬೇರೆ ಯಾವುದೇ ರೀತಿಯ ಅರ್ಜಿ/ಮನವಿಗಳನ್ನು ಪರಿಗಣಿಸಲಾಗುವುದಿಲ್ಲ.

ಆ) ದ್ವಿತೀಯ ಪಿ.ಯು.ಸಿ ಯ ಆಧಾರದ ಮೇಲೆ ಡಿ.ದೇವರಾಜ ಅರಸು ಪ್ರತಿಭಾ ಪುರಸ್ಕಾರಕ್ಕಾಗಿ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳು 10ನೇ ತರಗತಿಯನ್ನು ಸಿ.ಬಿ.ಎಸ್.ಇ/ಐ.ಸಿ.ಎಸ್.ಇ ಯಲ್ಲಿ ಅಧ್ಯಯನ ಮಾಡಿದ್ದಲ್ಲಿ ಅಂತಂಹ ವಿದ್ಯಾರ್ಥಿಗಳು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿಗೆ ಭೇಟಿ

ನೀಡಿ ತಮ್ಮ 10ನೇ ತರಗತಿಯ Initial details ಅನ್ನು Kar e-pass ನಲ್ಲಿ ನಮೂದಿಸಿಕೊಂಡ ಬಳಿಕ ಅರ್ಜಿ ಸಲ್ಲಿಸುವುದು.

ಇ) ಆನ್-ಲೈನ್ ಅರ್ಜಿಯೊಂದಿಗೆ JPG FORMAT ನಲ್ಲಿ ಸ್ಕ್ಯಾನ್ ಮಾಡಿ ಸಲ್ಲಿಸಬೇಕಾದ ದಾಖಲೆಗಳು. (ಪ್ರತಿದಾಖಲೆಯು 100 ಕೆಬಿ ಇರಬೇಕು)

- ➢ ವಿದ್ಯಾರ್ಥಿಯ ಪಾಸ್ ಪೋರ್ಟ್ ಅಳತೆಯ ಇತೀಚಿನ ಭಾವಚಿತ್ರ,
- ➢ ನಿಗದಿತ ಅಂಕಪಟ್ಟಿಗಳು(ಎಸ್.ಎಸ್.ಎಲ್.ಸಿ/ಪಿ.ಯು.ಸಿ)
- ➢ ಜಾತಿ ಮತ್ತು ಆದಾಯ ಪ್ರಮಾಣ ಪತ್ರ,
- ➢ ಆಧಾರ್ ಕಾರ್ಡ್ ನ ಪ್ರತಿ.
- ➢ ವಿದ್ಯಾರ್ಥಿಯ ಹೆಸರಿನಲ್ಲಿರುವ ಬ್ಯಾಂಕ್ ಪಾಸ್ ಪುಸ್ತಕದ ಮೊದಲ ಪುಟ (ಬ್ಯಾಂಕ್ ಹೆಸರು, ಬ್ಯಾಂಕ್ ಖಾತೆ ಸಂಖ್ಯೆ, ಬ್ಯಾಂಕ್ ಶಾಖೆಯ ಹೆಸರು, MIRC code of Bank Branch ಮತ್ತು IFSC code ಮಾಹಿತಿ) ಅನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡಬೇಕು.
- ➢ Mandate Form ನ ನಮೂನೆಯನ್ನು ಇಲಾಖಾ ವೆಬ್ ಸೈಟ್ ನಿಂದ ಡೌನ್ ಲೋಡ್ ಮಾಡಿಕೊಂಡು ಭರ್ತಿ ಮಾಡಿ ಅಪ್ ಲೋಡ್ ಮಾಡುವುದು.

8. ಆನ್-ಲೈನ್ ಮೂಲಕ ಸಲ್ಲಿಸಿರುವ ಅರ್ಜಿಯ ಪ್ರತಿ ಹಾಗೂ ಅಪ್ ಲೋಡ್ ಮಾಡಿರುವ ಎಲ್ಲಾ ದಾಖಲೆಗಳ ಒಂದು ಸೆಟ್ ದೃಢೀಕೃತ ಪ್ರತಿಯನ್ನು ವಿದ್ಯಾರ್ಥಿಗಳು ಅಧ್ಯಯನ ಮಾಡಿರುವ ಶಾಲಾ/ಕಾಲೇಜುಗಳ ಮುಖ್ಯಸ್ಥರಿಂದ ದೃಢೀಕರಿಸಿ, ಆಯಾ ಶಾಲಾ/ಕಾಲೇಜುಗಳಿರುವ ಜಿಲ್ಲೆಯ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿಗೆ ಸಲ್ಲಿಸಿ ದಿನಾಂಕ: 22-08-2018 ರೊಳಗೆ ಮೂಲ ದಾಖಲೆಗಳ ಪರಿಶೀಲನೆ ಮಾಡಿಸಿಕೊಳ್ಳುವುದು.
9. ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ವಿದ್ಯಾರ್ಥಿಗಳು ಸಲ್ಲಿಸಿರುವ ದಾಖಲೆಗಳನ್ನು ಪರಿಶೀಲಿಸಿ ಮಾಹಿತಿಯನ್ನು ಆನ್‌ಲೈನ್ ಮೂಲಕ ಅಪ್‌ಡೇಟ್ ಮಾಡುವುದು.
10. **On-line** ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 21-08-2018.
11. ಎಲ್ಲಾ ದಾಖಲೆಗಳನ್ನು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿಗೆ ಸಲ್ಲಿಸಲು ಕೊನೆಯ ದಿನಾಂಕ: 22-08-2018

ಸಹಾಯವಾಣಿ ಸಂಖ್ಯೆ: 8050770004

(ಕಛೇರಿಯ ಕಾರ್ಯನಿರ್ವಹಿಸುವ ಸಮಯ ಬೆಳಗ್ಗೆ 10.00 ರಿಂದ 1.30 ಹಾಗೂ ಅಪರಾಹ್ನ 2.15 ರಿಂದ 5.30 ರವರೆಗೆ ಸಾರ್ವಜನಿಕ ರಜಾ ದಿನಗಳನ್ನು ಹೊರತು ಪಡಿಸಿ)

ಆಯುಕ್ತರು,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,
ಬೆಂಗಳೂರು.